ದಿನಾಂಕ **: 09.07.2026** ರಂದು ಪಿಡಬ್ಲ್ಯೂ - 1 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

<u>ಮುಖ್ಯ ವಿಚಾರಣೆಃ</u> ಶ್ರೀಮತಿ ಕೆ.ಎಸ್., ಅರ್ಜಿದಾರರ ಪರ ವಕೀಲರಿಂದಃ

1. ನಾನು ಈ ಕೇಸಿನ ಅರ್ಜಿದಾರ. ನನ್ನ ಮುಖ್ಯ ವಿಚಾರಣೆಯ ಬದಲಿಗೆ ನಾನು ಈ ದಿನ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು , ಸದರಿ ಪ್ರಮಾಣ ಪತ್ರದಲ್ಲಿ ತಿಳಿಸಿರುವ ಅಂಶಗಳು ಸತ್ಯವಾಗಿವೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 1 ಎಂದು, ದೂರಿನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ನಿಪಿ - 2 ಎಂದು, ಸ್ಥಳ ಮಹಜರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 3 ಎಂದು, ಕಚ್ಚಾ ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 4 ಎಂದು, ಐಎಮ್‌ವಿ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 5 ಎಂದು, ಕಲಂ 160 ರ ನೋಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 6 ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 7 ಎಂದು, ನನ್ನ ಆಧಾರ್ ಕಾರ್ಡನ್ನು ಮತ್ತು ಅದರ ನೋಟರೀಕೃತ ನಕಲನ್ನು ಹಾಜರುಪಡಿಸಿದ್ದೇನೆ. (ನೋಟರೀಕೃತ ನಕಲನ್ನು ಮೂಲಪ್ರತಿಯೊಂದಿಗೆ ಹೋಲಿಸಿ ನೋಡಿದ ನಂತರ ಮೂಲಪ್ರತಿಯನ್ನು ಸಾಕ್ಷಿಗೆ ಹಿಂತಿರುಗಿಸಲಾಯಿತು). ಆಧಾರ್ ಕಾರ್ಡಿನ ನೋಟರೀಕೃತ ನಕಲನ್ನು ನಿಪಿ - 8

ಎಂದು, ಪೋಲೀಸರು ಸಲ್ಲಿಸಿರುವ ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ನಿಪಿ - 9 ಎಂದು, I.P. ಬಿಲ್ಲು ಮತ್ತು ಎರಡು ಬಿಲ್ಲುಗಳನ್ನು ಒಟ್ಟಾಗಿ ನಿಪಿ - 10 ಎಂದು, ವಾಹನ ಸರ್ವೆ ವರದಿಯನ್ನು ಛಾಯಾ ಚಿತ್ರಗಳ ಒಟ್ಟಿಗೆ ನಿಪಿ - 11 ಎಂದು, ಸದರಿ ವಾಹನ ವ್ಯಾಲ್ಯುವರ್ ಫೀಸನ್ನು, ಪಾವತಿಯ ರಶೀದಿಯನ್ನು ನಿಪಿ - 12 ಎಂದು ಈ ಮೇಲಿನ ದಾಖಲೆಗಳನ್ನು 2 ನೇ ಎದುರುದಾರರ ಪರ ವಕೀಲರ ತಕರಾರಿಗೆ ಒಳಪಟ್ಟು ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೋರಿದಂತೆ ಆದೇಶ ಮಾಡಬೇಕಾಗಿ ಪ್ರಾರ್ಥನೆ.

<u>ಪಾಟೀ ಸವಾಲುಃ</u> 2 ನೇ ಎದುರುದಾರರ ಪರ ವಕೀಲರು ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಎಂಎಸಿಟಿ.,

ಕಾರ್ಕಳ.